# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಪಿ.ಬಿ. ಸ್ವಾಮಿ, ಸಹಾಯಕ ಕೃಷಿ ನಿರ್ದೇಶಕರು(ನಿವೃತ್ತ) ಹಿಂದಿನ ಕಾರ್ಯ ನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಬೆಳಗಾಂ ಇವರ ವಿರುದ್ಧ ದಾಖಲಾಗಿರುವ ಲೋಕಾಯುಕ್ತ ಪ್ರಕರಣದಲ್ಲಿ ಸದರಿಯವರನ್ನು ಖುಲಾಸೆಗೊಳಿಸಿದ್ದರಿಂದ ಪ್ರಕರಣದಲ್ಲಿ ಅಂತಿಮ ಆದೇಶ ಹೊರಡಿಸುವ ಬಗ್ಗೆ

ಓದಲಾಗಿದೆ:-

1) ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಪತ್ರ ಸಂ.ಲೋಕ್/ಐಎನ್‌ವಿ(ಜಿ)/ಎಲ್-3/ಸಿಆರ್-2/2005/ಬಿಜಿಎಂ, ದಿನಾಂಕ: 31-12-2005.
2) ಸರ್ಕಾರದ ಆದೇಶ ಸಂ: ಕೃತೋಇ 16 ಕೃಪವಿ 2006, ದಿನಾಂಕ: 12-01-2009.
3) ಶ್ರೀ ಪಿ.ಬಿ. ಸ್ವಾಮಿ, ನಿವೃತ್ತ ಸಹಾಯಿಕ ಕೃಷಿ ನಿರ್ದೇಶಕರು, ಇವರ ಮನವಿ ದಿನಾಂಕ:03-01-2013.
4) ಕೃಷಿ ಆಯುಕ್ತರ ಪತ್ರ ಸಂ.ಸಿಬ್ಬಂದಿ-1/ವಿಚಾರಣೆ-5/19/2005-06, ದಿನಾಂಕ: 21-01-2013.

ಪ್ರಸ್ತಾವನೆ:-

ಮೇಲೆ ಕ್ರ.ಸಂ.(1)ರಲ್ಲಿ ಓದಲಾದ ಪತ್ರದಲ್ಲಿ, ಅಪರ ಆರಕ್ಷಕ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಶ್ರೀ ಪಾಂಡುರಂಗ ಬಾಬುರಾವ್ ಸ್ವಾಮಿ, ಸಹಾಯಕ ಕೃಷಿ ನಿರ್ದೇಶಕರು (ನಿವೃತ್ತ), ಇವರು ಈ ಹಿಂದೆ ತಾಲ್ಲೂಕು ಪಂಚಾಯತ್, ಬೆಳಗಾವಿಯಲ್ಲಿ ಕಾರ್ಯ ನಿರ್ವಾಹಕ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಇಂದಿರಾ ಅವಾಸ ಯೋಜನೆ, ಅಂಬೇಡ್ಕರ ಯೋಜನೆ ಮತ್ತು ಆಶ್ರಯ ಯೋಜನೆಗಳಡಿಯಲ್ಲಿ ಫಲಾನುಭವಿಗಳಿಗೆ ಮನೆ ಕಟ್ಟಲು ಹಣ ನೀಡುವಲ್ಲಿ ಸುಳ್ಳು ದಾಖಲೆಗಳನ್ನು ಸೃಷ್ಟಿಸಿ, ಸರ್ಕಾರದ ಹಣ ದುರುಪಯೋಗಪಡಿಸಿಕೊಂಡಿರುವರು ಎಂಬ ದೂರಿನ ಮೇರೆಗೆ, ಅವರ ವಿರುದ್ಧ ಲೋಕಾಯುಕ್ತ ಪೋಲಿಸ್ ಠಾಣೆ, ಬೆಳಗಾಂ ಇಲ್ಲಿ ಗುನ್ನೆ ಸಂ. 2/2005ರನ್ವಯ ಲೋಕಾಯುಕ್ತ ಅಧಿಕಾರಿಗಳು, ಲಂಚ ನಿರ್ಮೂಲನಾ ಕಾಯ್ದೆ, 1988ರ ಕಲಂ 13(1)(ಸಿ)(ಡಿ)(i)(ii) ಜೊತೆಯಲ್ಲಿ ಓದಲಾದ ಕಲಂ 13(2)ರನ್ವಯ ಮತ್ತು ಭಾರತೀಯ ದಂಡಸಂಹಿತೆ ಕಲಂ. 465,120(ಬಿ)ನ ಸಹ ಕಲಂ 34 ರ ಅಡಿಯಲ್ಲಿ ಪ್ರಕರಣ ದಾಖಲು ಮಾಡಿಕೊಂಡು, ತನಿಖೆ ನಡೆಸಿ, ಅಂತಿಮ ವರದಿಯನ್ನು ಸರ್ಕಾರಕ್ಕೆ ಕಳುಹಿಸಿ, ಸದರಿ ಪ್ರಕರಣದ ಕುರಿತು ಸಕ್ಷಮ ನ್ಯಾಯಾಲಯದಲ್ಲಿ ಅಭಿಯೋಜನೆಗೊಳಿಸಲು ಅಭಿಯೋಜನಾ ಮಂಜೂರಾತಿ ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ.(2)ರಲ್ಲಿ ಶ್ರೀ ಪಾಂಡುರಂಗ ಬಾಬುರಾವ್ ಸ್ವಾಮಿ, ಸಹಾಯಕ ಕೃಷಿ ನಿರ್ದೇಶಕರು (ನಿವೃತ್ತ) ಹಿಂದಿನ ಕಾರ್ಯ ನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಕಚೇರಿ, ಬೆಳಗಾಂ ಇವರ ವಿರುದ್ಧ ಸಕ್ಷಮ ನ್ಯಾಯಾಲಯದಲ್ಲಿ ಅಭಿಯೋಜನೆಗೊಳಿಸಲು ಅಭಿಯೋಜನಾ ಮಂಜೂರಾತಿ ನೀಡಲಾಗಿತ್ತು.

(31)

--2--

ಮೇಲೆ ಓದಲಾದ ಕ್ರ.ಸಂ.(3)ರಲ್ಲಿ ಶ್ರೀ ಪಾಂಡುರಂಗ ಬಾಬುರಾವ್ ಸ್ವಾಮಿ, ಸಹಾಯಕ ಕೃಷಿ ನಿರ್ದೇಶಕರು (ನಿವೃತ್ತ) ಹಾಗು ಹಿಂದಿನ ಕಾರ್ಯ ನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಕಚೇರಿ, ಬೆಳಗಾಂ, ಇವರು, ಬೆಳಗಾಂ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಮತ್ತು ಸ್ಪೆಷಲ್ ಜಡ್ಜ್(ಪಿ.ಸಿ.ಎ) ಸ್ಪೆಷಲ್ ಕೇಸ್ ಸಂ:47/2009 ಮತ್ತು 70/2010 ರಲ್ಲಿ ದಿನಾಂಕ:18-09-2012ರ ತೀರ್ಪಿನ ಪ್ರತಿಯೊಂದಿಗೆ ಘನ ನ್ಯಾಯಾಲಯವು, ಅವರನ್ನು ದೋಷಮುಕ್ತಗೊಳಿಸಿ, ತೀರ್ಪು ನೀಡಿದ್ದರಿಂದ, ಅದರಂತೆ ಅವರನ್ನು ದೋಷಮುಕ್ತಗೊಳಿಸಿ ಆದೇಶ ಹೊರಡಿಸ ಬೇಕೆಂದು, ಕೃಷಿ ಆಯುಕ್ತರು, ಮೇಲೆ ಓದಲಾದ ಕ್ರ.ಸಂ. (4)ರ ಪತ್ರದಲ್ಲಿ ಅವರ ಮನವಿಯೊಂದಿಗೆ ಕೋರಿಕೊಂಡಿರುತ್ತಾರೆ.

ಕೃಷಿ ಆಯುಕ್ತರ ಪ್ರಸ್ತಾವನೆಯಂತೆ ಹಾಗೂ ನಾಲ್ಕನೇ ಹೆಚ್ಚುವರಿ ಜಿಲ್ಲಾ ಮತ್ತು ಸೇಷನ್ಸ್ ನ್ಯಾಯಾಲಯ, ಬೆಳಗಾಂ ಇವರು ಶ್ರೀ ಪಾಂಡುರಂಗ ಬಾಬುರಾವ್ ಸ್ವಾಮಿ, ಇವರನ್ನು ಆರೋಪಗಳಿಂದ ಮುಕ್ತಗೊಳಿಸಿ (Acquitted) ನೀಡಿದ ತೀರ್ಪನ್ನು ಪರಿಶೀಲಿಸಿದ ಸರ್ಕಾರ, ಘನ ನ್ಯಾಯಾಲಯದ ಆದೇಶದಂತೆ ಶ್ರೀ ಪಾಂಡುರಂಗ ಬಾಬುರಾವ್ ಸ್ವಾಮಿ, ಸಹಾಯಕ ಕೃಷಿ ನಿರ್ದೇಶಕರು (ನಿವೃತ್ತ) ಹಿಂದಿನ ಕಾರ್ಯ ನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಕಚೇರಿ, ಬೆಳಗಾಂ, ಇವರನ್ನು ಅವರ ಮೇಲಿರುವ ಆರೋಪದಿಂದ ಮುಕ್ತಗೊಳಿಸಲು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃತೋಇ 16 ಕೃಪವಿ 2006**

**ಬೆಂಗಳೂರು, ದಿನಾಂಕ: 26-10-2013.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ ಶ್ರೀ ಪಾಂಡುರಂಗ ಬಾಬುರಾವ್ ಸ್ವಾಮಿ, ಸಹಾಯಕ ಕೃಷಿ ನಿರ್ದೇಶಕರು (ನಿವೃತ್ತ), ಹಿಂದಿನ ಕಾರ್ಯ ನಿರ್ವಾಹಕ ಅಧಿಕಾರಿ, ಇವರು ತಾಲ್ಲೂಕು ಪಂಚಾಯತ್, ಬೆಳಗಾವಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ಇಂದಿರಾ ಆವಾಸ ಯೋಜನೆ, ಅಂಬೇಡ್ಕರ ಯೋಜನೆ ಮತ್ತು ಆಶ್ರಯ ಯೋಜನೆಗಳಡಿಯಲ್ಲಿ, ಫಲಾನುಭವಿಗಳಿಗೆ ಮನೆ ಕಟ್ಟಲು ಹಣ ನೀಡುವಲ್ಲಿ ಸುಳ್ಳು ದಾಖಲೆಗಳನ್ನು ಸೃಷ್ಟಿಸಿ, ಸರ್ಕಾರದ ಹಣ ದುರುಪಯೋಗಪಡಿಸಿಕೊಂಡಿರುವರು ಎಂಬ ಆರೋಪದ ಬಗ್ಗೆ ಕರ್ನಾಟಕ ಲೋಕಾಯುಕ್ತ ಪೋಲಿಸರು, The IV Addl. District and Sessions Judge and Special Judge (PCA) ಬೆಳಗಾಂ ಸ್ಪೆಶಲ್ ಕೇಸ್ ಸಂ. 47/2009 ಮತ್ತು 70/2010 ರಲ್ಲಿ ಪ್ರಕರಣದ ದಾಖಲಿಸಿದ್ದು,

ಸದರಿ ಪ್ರಕರಣದ ಸಂಪೂರ್ಣ ವಿಚಾರಣೆ ನಡೆಸಿದ ಘನ ನ್ಯಾಯಾಲಯವು ದಿನಾಂಕ:18-09-2012ರಂದು, ಈ ಅಧಿಕಾರಿಯವರಿಗೆ ಸಂಬಂಧಪಟ್ಟಂತೆ ಮಾತ್ರ ಅವರನ್ನು ಅವರ ಮೇಲಿರುವ ಆರೋಪದಿಂದ ದೋಷಮುಕ್ತಗೊಳಿಸಿ ತೀರ್ಪು ನೀಡಿದ್ದರಿಂದ, (Acquitted), ಶ್ರೀ ಪಾಂಡುರಂಗ ಬಾಬುರಾವ್ ಸ್ವಾಮಿ, ಸಹಾಯಕ ಕೃಷಿ ನಿರ್ದೇಶಕರು (ನಿವೃತ್ತ), ಹಿಂದಿನ ಕಾರ್ಯ ನಿರ್ವಾಹಕ ಅಧಿಕಾರಿ, ಅಥಣಿ ತಾಲ್ಲೂಕು ಪಂಚಾಯತ್, ಬೆಳಗಾವಿ ಇವರನ್ನು ಅವರ ಮೇಲೆ ಹೊರಿಸಿರುವ ಆರೋಪಗಳಿಂದ ಮುಕ್ತಗೊಳಿಸಿ ಆದೇಶಿಸಿದೆ.

ಈ ಪ್ರಕರಣದ ಸಂಬಂಧ ತಡೆಹಿಡಿಯಲಾದ ಎಲ್ಲಾ ನಿವೃತ್ತಿ ಆರ್ಥಿಕ ಸೌಲಭ್ಯಗಳನ್ನು ಸದರಿ ನಿವೃತ್ತ ಅಧಿಕಾರಿಗಳಿಗೆ ಬಿಡುಗಡೆ ಮಾಡಲು ಸಹ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

ಇವರಿಗೆ:-

1) ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸ ಜಿಇ-05), ಕರ್ನಾಟಕ ಬೆಂಗಳೂರು.
2) ಅಪರ ಪೋಲಿಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
4) ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾಂ.
5) ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸೆ, ಬೆಂಗಳೂರು.
6) ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು.
7) ಜಂಟಿ ಕೃಷಿ ನಿರ್ದೇಶಕರು, ಬೆಳಗಾಂ ಜಿಲ್ಲೆ, ಬೆಳಗಾಂ.
8) ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿಗಳು, ಜಿಲ್ಲಾ ಜಲಾನಯನ ಅಭಿವೃದ್ಧಿ ಇಲಾಖೆ, ಬೆಳಗಾಂ .
9) ಪೋಲಿಸ ಅಧೀಕ್ಷಕರು, ಪೋಲಿಸ್ ವಿಭಾಗ, ಕರ್ನಾಟಕ ಲೋಕಾಯುಕ್ತ, ಬೆಳಗಾವಿ,
10) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಕೃಷಿ ಇಲಾಖೆ,
11) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೃಷಿ ಇಲಾಖೆ.
12) ಸಂಬಂಧಪಟ್ಟ ಅಧಿಕಾರಿಯವರಿಗೆ ( ಕೃಷಿ ಆಯುಕ್ತರ ಮೂಲಕ)
13) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.